## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 590 (727) |
| ಸದಸ್ಯರ ಹೆಸರು | | ಶ್ರೀ ಶ್ರೀ ಶಶಿಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | | 14.12.2020 |
| ಉತ್ತರಿಸಬೇಕಾದ ಸಚಿವರು | | ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ) |
| ಪ್ರಶ್ನೆ | | ಉತ್ತರ |
| (ಅ) | ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಬೋಧಕ ಸಿಬ್ಬಂದಿಗಳನ್ನು ಯಾವಾಗ ತುಂಬಿಕೊಳ್ಳಲಾಗುತ್ತದೆ; | ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಲ್ಲಿ 1242 ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯು ಸಹಮತಿ ನೀಡಿದ್ದು, ಸದರಿ 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 257 ಡಿಸಿಇ 2019 (ಭಾ-3), ದಿನಾಂಕ: 08.07.2020 ರಲ್ಲಿ ಅಂತಿಮ ವಿಶೇಷ ನೇಮಕಾತಿ ನಿಯಮಗಳನ್ನು ಹೊರಡಿಸಲಾಗಿದೆ.<br>ಪ್ರಸ್ತುತ ಕೋವಿಡ್-19 ಹಿನ್ನಲೆಯಲ್ಲಿ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ/03/ಬಿಇಎಂ/2020, ದಿನಾಂಕ: 06.07.2020 ರಲ್ಲಿ ತಿಳಿಸಿರುವಂತೆ 2020-21ನೇ ಸಾಲಿನಲ್ಲಿ ಯಾವುದೇ ನೇರನೇಮಕಾತಿಯನ್ನು ಕೈಗೊಳ್ಳುವಂತಿಲ್ಲವೆಂದು ನಿರ್ಬಂಧಿಸಿದೆ.<br>ಆರ್ಥಿಕ ಇಲಾಖೆಯು ವಿಧಿಸಿರುವ ನಿರ್ಬಂಧವನ್ನು ತೆರವುಗೊಳಿಸಿದ ನಂತರ ಸರ್ಕಾರಿ ಕಾಲೇಜುಗಳಲ್ಲಿನ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. |
| (ಆ) | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 1242 ಸಹಾಯಕ ಪ್ರಾಧ್ಯಾಪಕರನ್ನು ತುಂಬಿಕೊಳ್ಳಲು ಸರ್ಕಾರ ನಿರ್ಧಾರ ಕೈಗೊಂಡಿದೆಯೇ; ಹಾಗಿದ್ದಲ್ಲಿ, ನೇಮಕಾತಿ ಪ್ರಕ್ರಿಯೆ ಪ್ರಾರಂಭವಾಗುವುದು ಯಾವಾಗ; | |
| (ಇ) | ಈ ನೇಮಕಾತಿ ಮಾಡಿಕೊಳ್ಳುವಲ್ಲಿ ಸದ್ಯ ಹಲವಾರು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಆದ್ಯತೆ ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ; ಹಾಗಿದ್ದಲ್ಲಿ ಈ ಕುರಿತು ವಿವರ ನೀಡುವುದು? | ಸಹಾಯಕ ಪ್ರಾಧ್ಯಾಪಕರ ನೇರ ನೇಮಕಾತಿಯಲ್ಲಿ ಅತಿಥಿ ಉಪನ್ಯಾಸಕರಿಗೆ ಆದ್ಯತೆ ನೀಡಲು ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಹಾಗೂ ಯು.ಜಿ.ಸಿ. ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |

**ಇಡಿ 235 ಡಿಸಿಇ 2020**

(ಡಾ. ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)